# ಮೈಸೂರು ವಿಶ್ವವಿದ್ಯಾನಿಲಯ

**ಮೈಸೂರು ವಿಶ್ವವಿದ್ಯಾನಿಲಯದ ಕ್ರಾಫರ್ಡ್ ಭವನದ ಸಿಂಡಿಕೇಟ್ ಸಭಾಂಗಣದಲ್ಲಿ ದಿನಾಂಕ: 30-12-2021 ರಂದು ಪೂರ್ವಾಹ್ನ 11.00 ಗಂಟೆಗೆ ನಡೆದ "ಸಿಂಡಿಕೇಟಿನ ಒಂಭತ್ತನೇ ಸಾಮಾನ್ಯ ಸಭೆ"ಯ ನಡವಳಿಗಳು.**

<u>ಹಾಜರಿದ್ದ ಸದಸ್ಯರುಗಳು:</u>

| | | |
|---|---|---|
| 1. | ಪ್ರೊ. ಜಿ.ಹೇಮಂತಕುಮಾರ್ | ಕುಲಪತಿಗಳು ಹಾಗೂ ಅಧ್ಯಕ್ಷರು |
| 2. | ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ ಇವರ ಪರವಾಗಿ ಶ್ರೀ ಕೆ.ಸಿ ವೀರಭದ್ರಯ್ಯ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಮೈಸೂರು. | ಸದಸ್ಯರು |
| 3. | ಪ್ರೊ. ರಮೇಶ್ | ಸದಸ್ಯರು |
| 4. | ಶ್ರೀ ಎಂ.ಬಿ. ಗಪ್ಪಣ್ಣ | ಸದಸ್ಯರು |
| 5. | ಡಾ. ಚೈತ್ರ ನಾರಾಯಣ | ಸದಸ್ಯರು |
| 6. | ಡಾ. ವೆಂಕಟೇಶಯ್ಯ | ಸದಸ್ಯರು |
| 7. | ಡಾ. ನಾಗರಾಜು | ಸದಸ್ಯರು |
| 8. | ಡಾ. ಬಿ.ರಾಜಣ್ಣ | ಸದಸ್ಯರು |
| 9. | ಡಾ. ವೆಂಕಟೇಶ್ ಜೆ ಎನ್ | ಸದಸ್ಯರು |
| 10. | ಶ್ರೀ. ಆರ್.ಪ್ರದೀಪ್ ಕುಮಾರ್ ದೀಕ್ಷಿತ್ | ಸದಸ್ಯರು |
| 11. | ಶ್ರೀ ಎಸ್.ಡಿ.ದೊಡ್ಡಚಾರಿ | ಸದಸ್ಯರು |
| 12. | ಶ್ರೀಮತಿ ವೈ.ಕೆ.ಪವಿತ್ರ | ಸದಸ್ಯರು |
| 13. | ಡಾ. ಈ.ಸಿ.ನಿಂಗರಾಜ್ ಗೌಡ | ಸದಸ್ಯರು |
| 14. | ಡಾ. ಎಂ.ಎಸ್.ದಾಮೋಧರ | ಸದಸ್ಯರು |
| 15. | ಡಾ. ಸೈಯದ್ ಕಾರ್ರು ಮೊಹಿದ್ದೀನ್ (ವರ್ಚುವಲ್ ಮುಖಾಂತರ) | ಸದಸ್ಯರು |
| 16. | ಪ್ರೊ. ಎ.ಪಿ.ಜ್ಞಾನ ಪ್ರಕಾಶ್, ಕುಲಸಚಿವರು (ಪರೀಕ್ಷಾಂಗ) | ಸದಸ್ಯರು |
| 17. | ಡಾ. ಸಂಗೀತಾ ಗಜಾನನ್ ಭಟ್, ಹಣಕಾಸು ಅಧಿಕಾರಿಗಳು | ಸದಸ್ಯರು |
| 18. | ಪ್ರೊ. ಆರ್.ಶಿವಪ್ಪ | ಕುಲಸಚಿವರು ಹಾಗೂ ಸದಸ್ಯ ಕಾರ್ಯದರ್ಶಿ |

<u>ಹಾಜರಾಗದ ಸದಸ್ಯರು:</u>

1. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.
2. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.
3. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.
4. ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.

ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಇವರು ಸಭೆಗೆ ಹಾಜರಿದ್ದ ಸದಸ್ಯರುಗಳನ್ನು ಹುತ್ಪೂರ್ವಕವಾಗಿ ಸಭೆಗೆ ಸ್ವಾಗತಿಸಿದರು.

ಮೊದಲಿಗೆ ದಿನಾಂಕ: 08-12-2021 ರಂದು ಭಾರತದ ರಕ್ಷಣಾ ಪಡೆಗಳ ಸಿಬ್ಬಂದಿ ಮುಖ್ಯಸ್ಥ ಬಿಪನ್ ರಾವತ್ ಸೇರಿದಂತೆ 14 ಜನರ ಸದಸ್ಯರುಗಳ ತಂಡ ತಮಿಳುನಾಡಿನ ಕುನೂರ್ ಬಳಿ ಹೆಲಿಕಾಪ್ಟರ್ ಪತನಗೊಂಡು ಮೃತಪಟ್ಟ ಭಾರತದ ಹೆಮ್ಮೆಯ ಸೇನಾನಿಗಳ ನಿಧನಕ್ಕೆ ಸಂತಾಪ ಸೂಚಿಸಿ 2 ನಿಮಿಷಗಳ ಮೌನವನ್ನಾಚರಿಸಲಾಯಿತು.

ತದನಂತರ, ಮಾನ್ಯ ಕುಲಪತಿಗಳು ಕಾರ್ಯಸೂಚಿಯಲ್ಲಿನ ವಿಷಯಗಳನ್ನು ಸಭೆಯಲ್ಲಿ ಮಂಡಿಸಿದರು.

| ವಿಷಯ ಸಂಖ್ಯೆ | ವಿಷಯ ಸಂಕ್ಷಿಪ್ತವಾಗಿ |
|---|---|
| **ದಿನಾಂಕ : 15-11-2021ರಂದು ಜರುಗಿದ "ಎಂಟನೇ ಸಾಮಾನ್ಯ ಸಿಂಡಿಕೇಟಿನ ಸಭೆ"ಯ ನಡವಳಿಯನ್ನು ದೃಢೀಕರಿಸುವ ಬಗ್ಗೆ.<br>ಹಾಗೂ<br>ದಿನಾಂಕ : 26-11-2021ರಂದು ಜರುಗಿದ "ಸಿಂಡಿಕೇಟಿನ ವಿಶೇಷ ಸಭೆ"ಯ ನಡವಳಿಯನ್ನು ದೃಢೀಕರಿಸುವ ಬಗ್ಗೆ.** | |
| **ತೀರ್ಮಾನ** | ದಿನಾಂಕ: 15-11-2021ರಂದು ನಡೆದ ಸಿಂಡಿಕೇಟ್ ಸಭೆಯ ವಿಷಯ ಸಂಖ್ಯೆ 9.23ರಲ್ಲಿ ತೆಗೆದುಕೊಳ್ಳಲಾದ ತೀರ್ಮಾನಕ್ಕೆ ಮುಂದುವರಿಕೆಯಾಗಿ ಈ ಕೆಳಕಂಡಂತೆ ತೀರ್ಮಾನವನ್ನು ಸೇರ್ಪಡೆಗೊಳಿಸುವುದರೊಂದಿಗೆ ದಿನಾಂಕ: 15-11-2021ರಂದು ಜರುಗಿದ ಸಿಂಡಿಕೇಟ್ ಸಭೆಯ ನಡವಳಿಯನ್ನು ದೃಢೀಕರಿಸಲಾಯಿತು.<br>"2020-21ನೇ ಶೈಕ್ಷಣಿಕ ಸಾಲಿನಲ್ಲಿ ಕಾರ್ಯನಿರ್ವಹಿಸುತ್ತಿದ್ದ ಪದವಿ ಕಾಲೇಜುಗಳಲ್ಲಿನ ಅತಿಥಿ ಉಪನ್ಯಾಸಕರನ್ನು (ಶೈಕ್ಷಣಿಕ ವರ್ಷ ಪ್ರಾರಂಭವಾದ ದಿನಾಂಕದಿಂದ) 2021-22ನೇ ಶೈಕ್ಷಣಿಕ ಸಾಲಿನಲ್ಲೂ ಕಾರ್ಯಭಾರದ ಹಂಚಿಕೆಯೊಂದಿಗೆ ಆಹ್ವಾನಿಸಿರುವ ವಿಶ್ವವಿದ್ಯಾನಿಲಯ ಕ್ರಮವನ್ನು ಸಿಂಡಿಕೇಟ್ ಅನುಸಮರ್ಥಿಸಿತು".<br>ಹಾಗೂ<br>ದಿನಾಂಕ: 26-11-2021ರಂದು ಜರುಗಿದ "ಸಿಂಡಿಕೇಟಿನ ವಿಶೇಷ ಸಭೆ"ಯ ನಡವಳಿಯನ್ನು ಹಾಗೂ ತೆಗೆದುಕೊಂಡಿರುವ ಕ್ರಮವನ್ನು ದೃಢೀಕರಿಸಲಾಯಿತು. |
| **ಸಾಮಾನ್ಯ ಸಭೆ 2021/10.1** | ಮರಿಯನ್ ಇನ್‌ಸ್ಟಿಟ್ಯೂಟ್ ಆಫ್ ಪ್ರೊಫೆಷನಲ್ ಸ್ಟಡೀಸ್, ಎಂ.ಐ.ಟಿ. ಕ್ಯಾಂಪಸ್, ಕೆ.ಆರ್. ಮಿಲ್ಸ್, ಬೆಳವಾಡಿ, ಶ್ರೀರಂಗಪಟ್ಟಣ ತಾಲ್ಲೂಕು, ಮಂಡ್ಯ ಜಿಲ್ಲೆ ಇವರು ಕೋರಿರುವ ವಿಷಯಗಳ ಸಂಬಂಧ ಪರಿವೀಕ್ಷಣಾ ಸಮಿತಿ ಸಲ್ಲಿಸಿರುವ ವರದಿಯ ಬಗ್ಗೆ. |
| **ತೀರ್ಮಾನ** | ಪರಿವೀಕ್ಷಣಾ ಸಮಿತಿಯ ಶಿಫಾರಸ್ಸಿನನ್ವಯ, ಮರಿಯನ್ ಇನ್‌ಸ್ಟಿಟ್ಯೂಟ್ ಆಫ್ ಪ್ರೊಫೆಷನಲ್ ಸ್ಟಡೀಸ್, ಎಂ.ಐ.ಟಿ. ಕ್ಯಾಂಪಸ್, ಕೆ.ಆರ್. ಮಿಲ್ಸ್, ಬೆಳವಾಡಿ, ಶ್ರೀರಂಗಪಟ್ಟಣ ತಾಲ್ಲೂಕು, ಮಂಡ್ಯ ಜಿಲ್ಲೆ ಸಂಸ್ಥೆಗೆ (1) B.F.A. (Film Making), (2) BBA (Aviation and Logistics) and (3) M.A. (Indian Christian Theology and Missiology) ಪ್ರತಿ ಕೋರ್ಸಿಗೆ 40 ಪ್ರವೇಶಾತಿ ಸಂಖ್ಯಾಮಿತಿಯೊಂದಿಗೆ ಹೆಚ್ಚುವರಿ ವಿಷಯಗಳಲ್ಲಿ ವಿಶ್ವವಿದ್ಯಾನಿಲಯದಿಂದ ಮಾನ್ಯತೆ ನೀಡಲು ತೀರ್ಮಾನಿಸಲಾಯಿತು. |
| **ಸಾಮಾನ್ಯ ಸಭೆ 2021/10.2** | ದಿನಾಂಕ : 30-08-2022ರ "ಸ್ವರ್ಣ ಗೌರಿ" ಹಬ್ಬದ ದಿನವನ್ನು ಮೈಸೂರು ವಿಶ್ವವಿದ್ಯಾನಿಲಯವು "ಸ್ಥಳೀಯ ರಜೆ" ಎಂದು ಘೋಷಿಸುವ ಬಗ್ಗೆ. |
| **ತೀರ್ಮಾನ** | ಪ್ರತಿ ವರ್ಷ ಸ್ವರ್ಣಗೌರಿ ವ್ರತ ಹಬ್ಬದ ದಿನವನ್ನು ಮೈಸೂರು ವಿಶ್ವವಿದ್ಯಾನಿಲಯ ಮಟ್ಟದಲ್ಲಿ ಸ್ಥಳೀಯ ಸಾರ್ವತ್ರಿಕ ರಜೆ ದಿನವೆಂದು ಹಿಂದಿನಿಂದಲೂ ಘೋಷಿಸಲಾಗುತ್ತಿರುವುದರಿಂದ ಈ ವರ್ಷದಲ್ಲೂ ಸಹ ದಿನಾಂಕ: 30-08-2022ರ ಮಂಗಳವಾರದಂದು ಬರುವ "ಸ್ವರ್ಣಗೌರಿ ವ್ರತ" ದಿನವನ್ನು ವಿಶ್ವವಿದ್ಯಾನಿಲಯದ ಸ್ಥಳೀಯ ರಜಾದಿನವೆಂದು ಘೋಷಿಸಲು ತೀರ್ಮಾನಿಸಲಾಯಿತು. |
| **ಸಾಮಾನ್ಯ ಸಭೆ 2021/10.3** | ವಿಶ್ವವಿದ್ಯಾನಿಲಯದ ದತ್ತಾಂಶ ಕೇಂದ್ರದ ಸರ್ವರ್ ಸಿಸ್ಟಮ್‌ಗಳ ಹ್ಯಾಕಿಂಗ್ ತಡೆಯಲು ಅಳವಡಿಸಿರುವ Web Application Firewall (WAF) ಲೈಸೆನ್ಸ್ ನವೀಕರಣದ ಬಗ್ಗೆ. |
| **ತೀರ್ಮಾನ** | ಮೈಸೂರು ವಿಶ್ವವಿದ್ಯಾನಿಲಯದ ಇಂಟರ್‌ನೆಟ್ ನೆಟ್‌ವರ್ಕ್ ಮತ್ತು ಸರ್ವರ್‌ಗಳ ಸುರಕ್ಷತೆಗೆಂದು ಹಾಗೂ ವಿಶ್ವವಿದ್ಯಾನಿಲಯದ ದತ್ತಾಂಶ ಕೇಂದ್ರದ ಸರ್ವರ್ ಸಿಸ್ಟಮ್‌ಗಳ ಹ್ಯಾಕಿಂಗ್ ತಡೆಯಲು Barracuda Web Application Firewall (WAF) model 660 ಅನ್ನು ಒಂದು ವರ್ಷದ ಅವಧಿಗೆ ಅಳವಡಿಸಿ ಸೇವೆಯನ್ನು ಪಡೆಯಲು ತಗುಲಬಹುದಾದ ಅಂದಾಜು ವೆಚ್ಚ ರೂ.17,63,580/- (ಹದಿನೇಳು ಲಕ್ಷದ ಅರವತ್ತ |

| | |
|---|---|
| | ಮೂರು ಸಾವಿರದ ಐದುನೂರ ಎಂಭತ್ತು ರೂಪಾಯಿಗಳು ಮಾತ್ರ)ಗಳನ್ನು ವಿಶ್ವವಿದ್ಯಾನಿಲಯದ ನಿಯಮಾನುಸಾರ ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ ಟೆಂಡರ್ ಆಹ್ವಾನಿಸಿ ಕ್ರಮ ಕೈಗೊಂಡು ಸದರಿ ವೆಚ್ಚವನ್ನು Information and Infrastructure Development Fund (I.I.D.F) ಶೀರ್ಷಿಕೆಯಿಂದ ಭರಿಸಲು ಅನುಮತಿ ನೀಡಿ ಆದೇಶ ಹೊರಡಿಸಿರುವುದನ್ನು ಸಭೆಯು ಅನುಸಮರ್ಥಿಸಿತು. |
| **ಸಾಮಾನ್ಯ ಸಭೆ 2021/10.4** | ಕು. ಕುಸುಮ ಎ., ಸಂಸ್ಕೃತ ಅಧ್ಯಯನ ವಿಭಾಗದ ಹಳೆಯ ವಿದ್ಯಾರ್ಥಿ, ಮಾನಸಗಂಗೋತ್ರಿ, ಮೈಸೂರು, ಇವರು ವಿಶ್ವವಿದ್ಯಾನಿಲಯಕ್ಕೆ ನೀಡಿರುವ ದೂರಿನ ಕುರಿತು ವಿಚಾರಣೆ ನಡೆಸಿರುವ ವರದಿ ಬಗ್ಗೆ. |
| **ತೀರ್ಮಾನ** | ಮುಂದೂಡಲಾಯಿತು |
| **ಸಾಮಾನ್ಯ ಸಭೆ 2021/10.5** | ವಿಶ್ವವಿದ್ಯಾನಿಲಯದಲ್ಲಿ ಚಿನ್ನದ ಪದಕ/ನಗದು ಬಹುಮಾನ ದತ್ತಿಗಳನ್ನು ಸ್ಥಾಪನೆ ಮಾಡುವ ಬಗ್ಗೆ. |
| **ತೀರ್ಮಾನ** | ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಚಿನ್ನದ ಪದಕ/ನಗದು ಬಹುಮಾನ ದತ್ತಿಗಳನ್ನು ಸ್ಥಾಪನೆ ಮಾಡುವ ಸಂಬಂಧ ಹಲವು ದಾನಿಗಳು ಡಿ.ಡಿ ಮತ್ತು ಚೆಕ್‌ಗಳನ್ನು ವಿಶ್ವವಿದ್ಯಾನಿಲಯದ Endowment ಖಾತೆಗೆ ಜಮಾ ಮಾಡಲಾಗಿದ್ದು, ಮುಂಬರುವ ವಾರ್ಷಿಕ ಘಟಿಕೋತ್ಸವದಲ್ಲಿ ದಾನಿಗಳು ದತ್ತಿಯ ನಿಬಂಧನೆಯಲ್ಲಿ ತಿಳಿಸಿರುವಂತೆ ಅರ್ಹ ಅಭ್ಯರ್ಥಿಗೆ ಈ ಕೆಳಕಂಡ ಚಿನ್ನದ ಪದಕ/ನಗದು ಬಹುಮಾನ ದತ್ತಿಗಳನ್ನು ಸ್ಥಾಪಿಸಲು ಸಭೆಯು ಅನುಮೋದಿಸಿತು. |

| ಕ್ರ. ಸಂ. | ದಾನಿಗಳ ಹೆಸರು ಮತ್ತು ವಿಳಾಸ | ದತ್ತಿಗಳ ಹೆಸರು | ಚಿನ್ನದ ಪದಕ/ ನಗದು ಬಹುಮಾನ | ಷರತ್ತುಗಳು | ಪಾವತಿಸಿರುವ ಮೊತ್ತ |
|---|---|---|---|---|---|
| 1 | ಶಶಿಕಲ ಮುನಿಯಪ್ಪ # 266, ಸೋನಾರ್ ರಸ್ತೆ ಮೈಸೂರು-570 024 | ಶ್ರೀ ಹನುಮಪ್ಪ ಶ್ರೀಮತಿ ಚಿನ್ನಮ್ಮ ಯಮಲೂರು | ನಗದು ಬಹುಮಾನ | Master in Social Work-Securing Second highest marks | 50,000/- |
| 2 | ಶಶಿಕಲ ಮುನಿಯಪ್ಪ # 266, ಸೋನಾರ್ ರಸ್ತೆ ಮೈಸೂರು-570 024 | ಶ್ರೀ ವೈ ಮುನಿಯಪ್ಪ ಶ್ರೀಮತಿ ರುಕ್ಮಿಣಿಯಮ್ಮ | ಚಿನ್ನದ ಪದಕ | M.A in History Securing highest marks | 1,00,000/- |
| 3 | ಶಶಿಕಲ ಮುನಿಯಪ್ಪ # 266, ಸೋನಾರ್ ರಸ್ತೆ ಮೈಸೂರು-570 024 | ಡಾ.ಹೆಚ್.ಸುದರ್ಶನ್ | ಚಿನ್ನದ ಪದಕ | Master in Social Work – Securing highest marks | 1,00,000/- |
| 4 | ರೇಣು ಮಹೇಶ್ # 730/1, ಇ & ಎಫ್ ಬ್ಲಾಕ್, ಗಂಗೆ ರಸ್ತೆ ಕುವೆಂಪುನಗರ | ಪ್ರೊ.ಬಿ.ಯು. ಓಂಕಾರಪ್ಪ ಶ್ರೀಮತಿ ನಿರ್ಮಲ ದಾವಣಗೆರೆ | ಚಿನ್ನದ ಪದಕ | L.L.M – Securing highest marks | 1,00,000/- |

| | | | | | | |
|---|---|---|---|---|---|---|
| | 5 | ಲೇಟ್ ಶ್ರೀಮತಿ ನಾಗಮಣಿ ಸುಂದರರಾಜ್ ಐಯ್ಯಂಗಾರ್ ಶ್ರೀ ನರಸಿಂಹ ಕೃಪ # 1964/1, ನ್ಯೂ 88/1 3ನೇ ಕ್ರಾಸ್, ಕೊತ್ತಾಲ್ ರಾಮಯ್ಯ ರಸ್ತೆ ದೇವರಾಜ ಮೊಹಲ್ಲಾ ಮೈಸೂರು-01 | ಲೇಟ್ ಶ್ರೀಮತಿ ನಾಗಮಣಿ ಸುಂದರ್‌ರಾಜ್ ಐಯ್ಯಂಗಾರ್ | ಚಿನ್ನದ ಪದಕ | M.Music (Vocal)- Securing highest marks | 1,00,000/- |
| | 6 | ಶ್ರೀ ಕರುಣ್ ತಂದೂರ್ ಟ್ರಸ್ಟಿ, # 162, ಅರವಿಂದ್ 1ನೇ ಕ್ರಾಸ್, 3ನೇ ಮೇನ್ ಜೆ.ಪಿ.ನಗರ, 2ನೇ ಪೇಸ್ ಬೆಂಗಳೂರು78 | ಪ್ರೊ.ಎಂ.ಯಮು-ನಾಚಾರ್ಯ ಮೆಮೊರಿಯಲ್ ಟ್ರಸ್ಟ್ | ನಗದು ಬಹುಮಾನ | M.A Philosophy – Securing highest | 1,00,000/- |

| | |
|---|---|
| ಸಾಮಾನ್ಯ ಸಭೆ 2021/10.6 | 102ನೇ ವಾರ್ಷಿಕ ಘಟಿಕೋತ್ಸವದಲ್ಲಿ ಗೌರವ ಡಾಕ್ಟರೇಟ್ ಪದವಿ ಪಡೆಯಲು ಗಣ್ಯರ ಹೆಸರುಗಳನ್ನು ಶಿಫಾರಸ್ಸು ಮಾಡುವ ಬಗ್ಗೆ. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000 ಪ್ರಕರಣ 69(1)ರ ಪ್ರಕಾರ ಮೈಸೂರು ವಿಶ್ವವಿದ್ಯಾನಿಲಯದ 102ನೇ ವಾರ್ಷಿಕ ಘಟಿಕೋತ್ಸವದಲ್ಲಿ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡುವ ಸಂಬಂಧ ವ್ಯಕ್ತಿಗತ ವಿವರದೊಂದಿಗೆ ಸಿಂಡಿಕೇಟ್ ಸದಸ್ಯರು ಅರ್ಹ ಅಭ್ಯರ್ಥಿಗಳ ಪ್ರಸ್ತಾವನೆಯನ್ನು ದಿನಾಂಕ: 10-01-2022 ರೊಳಗೆ ಮಾನ್ಯ ಕುಲಪತಿಗಳಿಗೆ ಸಲ್ಲಿಸಲು ಸಿಂಡಿಕೇಟ್ ಸಭೆಯು ತೀರ್ಮಾನಿಸಿತು. |
| ಸಾಮಾನ್ಯ ಸಭೆ 2021/10.7 | ವಿಶ್ವವಿದ್ಯಾನಿಲಯದ 102ನೇ ವಾರ್ಷಿಕ ಘಟಿಕೋತ್ಸವದ ಸಂಬಂಧ ದಿನಾಂಕ, ಸಮಯ, ಸ್ಥಳ ನಿಗದಿಪಡಿಸುವ ಹಾಗೂ ಮುಖ್ಯ ಅತಿಥಿಗಳನ್ನು ಆಹ್ವಾನಿಸುವ ಬಗೆಗೆ. |
| ತೀರ್ಮಾನ | ವಿಶ್ವವಿದ್ಯಾನಿಲಯದ 102ನೇ ವಾರ್ಷಿಕ ಘಟಿಕೋತ್ಸವವನ್ನು ಕ್ರಾಫರ್ಡ್ ಭವನದಲ್ಲಿ ಏರ್ಪಡಿಸುವುದು ಹಾಗೂ ಸದರಿ ಘಟಿಕೋತ್ಸವಕ್ಕೆ ದಿನಾಂಕ, ಸಮಯ ಮತ್ತು ಆಹ್ವಾನಿಸುವ ಮುಖ್ಯ ಅತಿಥಿಯ ಹೆಸರನ್ನು ಘನತೆವೆತ್ತ ಕುಲಾಧಿಪತಿಗಳಿಗೆ ಶಿಫಾರಸ್ಸು ಮಾಡಲು ಮಾನ್ಯ ಕುಲಪತಿಗಳಿಗೆ ಅಧಿಕಾರ ನೀಡಲು ಸಿಂಡಿಕೇಟ್ ತೀರ್ಮಾನಿಸಿತು. |
| ಸಾಮಾನ್ಯ ಸಭೆ 2021/10.8 | ಶ್ರೀ ಜಿ. ರವಿ, ಅಸಿಸ್ಟೆಂಟ್ ಆರ್ಕಿವಿಸ್ಟ್ ಇವರಿಗೆ 7ನೇ ಯುಜಿಸಿ ಪರಿಷ್ಕೃತ ವೇತನ ಶ್ರೇಣಿಯನ್ನು ವಿಸ್ತರಿಸುವ ಬಗ್ಗೆ. |
| ತೀರ್ಮಾನ | ಶ್ರೀ ಜಿ. ರವಿ, ಅಸಿಸ್ಟೆಂಟ್ ಆರ್ಕಿವಿಸ್ಟ್, ವಿಶ್ವವಿದ್ಯಾನಿಲಯ ಗ್ರಂಥಾಲಯ, ಮಾನಸಗಂಗೋತ್ರಿ, ಮೈಸೂರು ಇವರಿಗೆ ದಿನಾಂಕ: 01-01-2016 ರಿಂದ ಜಾರಿಗೆ ಬಂದಂತೆ 7ನೇ ಯುಜಿಸಿ ಪರಿಷ್ಕೃತ ವೇತನ ಶ್ರೇಣಿಯನ್ನು ವಿಸ್ತರಿಸಲು ಸಿಂಡಿಕೇಟ್ ಅನುಮೋದಿಸಿತು. |
| ಸಾಮಾನ್ಯ ಸಭೆ 2021/10.9 | "ಕಂಬಾಪತಿ ಶ್ರೀನಿವಾಸ ರಾವ್ ಸ್ಮಾರಕ ನಗದು ಬಹುಮಾನ" ದತ್ತಿ ಸ್ಥಾಪನೆ ಮಾಡುವ ಬಗ್ಗೆ. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000ರ ಅನ್ವಯ ಪ್ರಕರಣ 31 (2) (IX) ಪ್ರಕಾರ ದಾನಿಗಳು ದತ್ತಿಯ ನಿಬಂಧನೆಯಲ್ಲಿ ತಿಳಿಸಿರುವಂತೆ ಪ್ರತಿ ವರ್ಷ ಸದರಿ ದತ್ತಿಯ ಮೂಲಧನಕ್ಕೆ ಕ್ರೋಢಿಕೃತವಾಗುವ ಬಡ್ಡಿಯ ಹಣದಲ್ಲಿ ಶೇ.20ರಷ್ಟನ್ನು ದತ್ತಿಯ ಮೂಲ ಧನಕ್ಕೆ ಸೇರಿಸಿ, ಉಳಿದ ಶೇ.80 ರಷ್ಟು ಬಡ್ಡಿಯ ಹಣವನ್ನು M.Sc Molecular Biology ಸಂಬಂಧಿತ ವಿಷಯ/ಪತ್ರಿಕೆಯಲ್ಲಿ ತೇರ್ಗಡೆಯಾದ ಎರಡನೇ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗೆ "ಕಂಭಾಪತಿ ಶ್ರೀನಿವಾಸ ರಾವ್ ಸ್ಮಾರಕ ನಗದು ಬಹುಮಾನ" ದತ್ತಿ ಸ್ಥಾಪನೆ ಮಾಡಲು ಸಿಂಡಿಕೇಟ್ ಅನುಮೋದಿಸಿತು. |
| ಸಾಮಾನ್ಯ ಸಭೆ 2021/10.10 | ದಿನಾಂಕ: 25-11-2021 ರಂದು ನಡೆದ ಮೊದಲನೆಯ ಕ್ರೀಡಾ ಸಮಿತಿಯ ನಡವಳಿಯನ್ನು ಅನುಮೋದಿಸುವ ಬಗ್ಗೆ. |
| ತೀರ್ಮಾನ | ದಿನಾಂಕ: 25-11-2021 ರಂದು ನಡೆದ ಮೊದಲನೆಯ ಕ್ರೀಡಾ ಸಮಿತಿಯ ನಡವಳಿಯನ್ನು ಸಿಂಡಿಕೇಟ್ ಅನುಮೋದಿಸಿತು. |

| | |
|---|---|
| ಸಾಮಾನ್ಯ ಸಭೆ 2021/10.11 | ವಿಶ್ವವಿದ್ಯಾನಿಲಯದ 2020-21ನೇ ಸಾಲಿನ ವಾರ್ಷಿಕ ವರದಿಯ ಪರಿಶೀಲನೆ ಹಾಗೂ ಅನುಮೋದನೆ ಬಗ್ಗೆ. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000ರ ಪ್ರಕರಣ 50(1)ರ ಪ್ರಕಾರ ಸಿದ್ಧಪಡಿಸಲಾಗಿರುವ ವಿಶ್ವವಿದ್ಯಾನಿಲಯದ 2020-21ನೇ ಸಾಲಿನ (ದಿನಾಂಕ: 01-04-2020 ರಿಂದ 31-03-2021 ರವರೆಗೆ) ವಾರ್ಷಿಕ ವರದಿಯನ್ನು ಸಿಂಡಿಕೇಟ್ ಅನುಮೋದಿಸಿತು. |
| ಸಾಮಾನ್ಯ ಸಭೆ 2021/10.12 | ಹಿಂದಿ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರನ್ನು ನೇಮಕ ಮಾಡುವ ಬಗ್ಗೆ. |
| | ಮಾನ್ಯ ಕುಲಪತಿಗಳು ಮಾತನಾಡಿ, ಪ್ರೊ. ಪ್ರತಿಭಾ ಆರ್ ಮುದಲಿಯಾರ್, ಪ್ರಾಧ್ಯಾಪಕರು, ಹಿಂದಿ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ: 16-03-2020 ರಿಂದ ಜಾರಿಗೆ ಬಂದಂತೆ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿತ್ತು. ಸದರಿಯವರು ದಿನಾಂಕ: 31-12-2021 ರಂದು ವಿಶ್ವವಿದ್ಯಾನಿಲಯದ ಸೇವೆಯಿಂದ ವಯೋನಿವೃತ್ತಿಯನ್ನು ಹೊಂದುತ್ತಿರುವುದರಿಂದ ವಿಭಾಗದ ಅಧ್ಯಕ್ಷರ ಅವಧಿಯು ಮುಕ್ತಾಯಗೊಳ್ಳುತ್ತಿದೆ.<br>ಹಿಂದಿ ಅಧ್ಯಯನ ವಿಭಾಗದಲ್ಲಿ ಪ್ರೊ. ಪ್ರತಿಭಾ ಆರ್ ಮುದಲಿಯಾರ್, ಪ್ರಾಧ್ಯಾಪಕರನ್ನು ಹೊರತುಪಡಿಸಿ, ಈ ಅಧ್ಯಯನ ವಿಭಾಗದಲ್ಲಿ ಯಾರು ಖಾಯಂ ಪ್ರಾಧ್ಯಾಪಕರು ಮತ್ತು ಸಹ ಪ್ರಾಧ್ಯಾಪಕರುಗಳು ಇಲ್ಲವಾದ್ದರಿಂದ ಖಾಯಂ ಸಹಾಯಕ ಪ್ರಾಧ್ಯಾಪಕರಾಗಿರುವ ಡಾ. ವಾಸಂತಿ.ಎಂ ಇವರನ್ನು ಮುಂದಿನ ಅಧ್ಯಕ್ಷರನ್ನಾಗಿ ನೇಮಕ ಮಾಡಬಹುದೆಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000, ಪ್ರಕರಣ 34(7)ರ ಪ್ರಕಾರ ಡಾ. ವಾಸಂತಿ.ಎಂ, ಸಹಾಯಕ ಪ್ರಾಧ್ಯಾಪಕರು, ಹಿಂದಿ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ: 01-01-2022 ರಿಂದ ಜಾರಿಗೆ ಬಂದಂತೆ ಎರಡು ವರ್ಷಗಳ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಹಿಂದಿ ಅಧ್ಯಯನ ವಿಭಾಗದ ಅಧ್ಯಕ್ಷರನ್ನಾಗಿ ನೇಮಕ ಮಾಡಲು ಸಭೆಯಲ್ಲಿ ತೀರ್ಮಾನಿಸಲಾಯಿತು. |
| ಸಾಮಾನ್ಯ ಸಭೆ 2021/10.13 | ಉರ್ದು ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರನ್ನು ನೇಮಕ ಮಾಡುವ ಬಗ್ಗೆ. |
| | ಮಾನ್ಯ ಕುಲಪತಿಗಳು ಮಾತನಾಡಿ, ಪ್ರೊ. ಪ್ರತಿಭಾ ಆರ್ ಮುದಲಿಯಾರ್, ಪ್ರಾಧ್ಯಾಪಕರು, ಹಿಂದಿ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ಉರ್ದು ಅಧ್ಯಯನ ವಿಭಾಗದ ದೈನಂದಿನ ಕೆಲಸಕಾರ್ಯಗಳು ಸುಲಲಿತವಾಗಿ ನಡೆಯಲು ದಿನಾಂಕ: 03-09-2018 ರಿಂದ ಜಾರಿಗೆ ಬಂದಂತೆ ಉರ್ದು ಅಧ್ಯಯನ ವಿಭಾಗದ ಪ್ರಭಾರ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿತ್ತು. ಸದರಿಯವರು ದಿನಾಂಕ: 31-12-2021 ರಂದು ವಿಶ್ವವಿದ್ಯಾನಿಲಯದ ಸೇವೆಯಿಂದ ವಯೋನಿವೃತ್ತಿಯನ್ನು ಹೊಂದುತ್ತಿರುವುದರಿಂದ ವಿಭಾಗದ ಅಧ್ಯಕ್ಷರ ಅವಧಿಯು ಮುಕ್ತಾಯಗೊಳ್ಳುತ್ತಿದೆ.<br>ಉರ್ದು ಅಧ್ಯಯನ ವಿಭಾಗದಲ್ಲಿ ಯಾರು ಖಾಯಂ ಪ್ರಾಧ್ಯಾಪಕರು/ಸಹ/ ಸಹಾಯಕ ಪ್ರಾಧ್ಯಾಪಕರುಗಳು ಇರುವುದಿಲ್ಲವಾದ್ದರಿಂದ ದೈನಂದಿನ ಕೆಲಸಕಾರ್ಯಗಳು ಸುಲಲಿತವಾಗಿ ನಡೆಯಲು ದಿನಾಂಕ: 01-01-2022ರಿಂದ ಜಾರಿಗೆ ಬಂದಂತೆ ಡಾ. ವಾಸಂತಿ.ಎಂ, ಸಹಾಯಕ ಪ್ರಾಧ್ಯಾಪಕರು, ಹಿಂದಿ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಅವರನ್ನು ಮುಂದಿನ ಆದೇಶದವರೆಗೆ ಉರ್ದು ಅಧ್ಯಯನ ವಿಭಾಗದ ಪ್ರಭಾರ ಅಧ್ಯಕ್ಷರನ್ನಾಗಿ ನೇಮಕ ಮಾಡಬಹುದೆಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000, ಪ್ರಕರಣ 34(7)ರ ಪ್ರಕಾರ ಡಾ. ವಾಸಂತಿ.ಎಂ, ಸಹಾಯಕ ಪ್ರಾಧ್ಯಾಪಕರು, ಹಿಂದಿ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ: 01-01-2022 ರಿಂದ ಜಾರಿಗೆ ಬಂದಂತೆ ಅಥವಾ ಮುಂದಿನ ಆದೇಶದವರೆಗೆ ಉರ್ದು ಅಧ್ಯಯನ ವಿಭಾಗದ ಪ್ರಭಾರ ಅಧ್ಯಕ್ಷರನ್ನಾಗಿ ನೇಮಕ ಮಾಡಲು ಸಭೆಯಲ್ಲಿ ತೀರ್ಮಾನಿಸಲಾಯಿತು. |

| | |
|---|---|
| **ಸಾಮಾನ್ಯ ಸಭೆ 2021/10.14** | ಸಂವಹನ ಮತ್ತು ಪತ್ರಿಕೋದ್ಯಮ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರನ್ನು ನೇಮಕ ಮಾಡುವ ಬಗ್ಗೆ. |
| | ಮಾನ್ಯ ಕುಲಪತಿಗಳು ಮಾತನಾಡಿ, ಪ್ರೊ. ನಿರಂಜನ್, ಪ್ರಾಧ್ಯಾಪಕರು, ಸಂವಹನ ಮತ್ತು ಪತ್ರಿಕೋದ್ಯಮ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರು ದಿನಾಂಕ: 01-02-2021 ರಿಂದ ಜಾರಿಗೆ ಬಂದಂತೆ ಸಂವಹನ ಮತ್ತು ಪತ್ರಿಕೋದ್ಯಮ ಅಧ್ಯಯನ ವಿಭಾಗದ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿತ್ತು. ಕರ್ನಾಟಕ ರಾಜ್ಯಪಾಲರ ಆದೇಶದನುಸಾರ ಸರ್ಕಾರದ ಅಧೀನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಅಧಿಸೂಚನೆ ದಿನಾಂಕ: 30-11-2021ರ ಅನ್ವಯ ಪ್ರೊ. ನಿರಂಜನ್ ಇವರನ್ನು ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯ, ಕೋಲಾರ ಉಪಕುಲಪತಿ ಹುದ್ದೆಗೆ ನೇಮಕ ಮಾಡಲಾಗಿದೆ. ಈ ಸಂಬಂಧ ಮೈಸೂರು ವಿಶ್ವವಿದ್ಯಾನಿಲಯವು ದಿನಾಂಕ: 30-11-2021 ರಂದು ಸದರಿಯವರನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಲಾಗಿದೆ.<br><br>ಪ್ರಸ್ತುತ ಸಂವಹನ ಮತ್ತು ಪತ್ರಿಕೋದ್ಯಮ ಅಧ್ಯಯನ ವಿಭಾಗದಲ್ಲಿ ಪ್ರೊ. ಸಿ.ಕೆ.ಪುಟ್ಟಸ್ವಾಮಿ ಹಾಗೂ ಪ್ರೊ. ಎಂ.ಎಸ್.ಸಪ್ನ ಇವರುಗಳು ಪ್ರಾಧ್ಯಾಪಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಪ್ರೊ. ನಿರಂಜನ್ ನಂತರದ ಜೇಷ್ಠತೆಯಲ್ಲಿ ಪ್ರೊ.ಸಿ.ಕೆ.ಪುಟ್ಟಸ್ವಾಮಿ ಅವರು ಹಿರಿಯರಾಗಿರುತ್ತಾರೆ. ಆದರೆ, ಪ್ರೊ. ನಿರಂಜನ್ ಅವರ ಅಧ್ಯಕ್ಷರ ಅವಧಿಯು ಪೂರ್ಣಗೊಂಡ ನಂತರ ಪ್ರೊ. ಎಂ.ಎಸ್.ಸಪ್ನ ಇವರನ್ನು ಸದರಿ ವಿಭಾಗಕ್ಕೆ ಅಧ್ಯಕ್ಷರನ್ನಾಗಿ ನೇಮಕ ಮಾಡಲು ಈಗಾಗಲೇ ಸಿಂಡಿಕೇಟ್ ಸಭೆಯಲ್ಲಿ ನಿರ್ಧರಿಸಲಾಗಿರುವ ಹಿನ್ನೆಲೆಯಲ್ಲಿ ವಿಶ್ವವಿದ್ಯಾನಿಲಯದ ನಿಯಮಾನುಸಾರ ಹಾಗೂ ಕೂಲಂಕಷವಾಗಿ ಪರಿಶೀಲಿಸಿದ ನಂತರ ಸದರಿ ವಿಭಾಗಕ್ಕೆ ಅಧ್ಯಕ್ಷರನ್ನಾಗಿ ನೇಮಕ ಮಾಡುವ ಸಂಬಂಧ ಮುಂದಿನ ಸಿಂಡಿಕೇಟ್ ಸಭೆಯಲ್ಲಿ ತೀರ್ಮಾನ ತೆಗೆದುಕೊಳ್ಳುವವರೆಗೆ ಅಂದರೆ ಒಂದು ತಿಂಗಳು ಮಟ್ಟಿಗೆ ಪ್ರೊ. ಸಿ.ಕೆ.ಪುಟ್ಟಸ್ವಾಮಿ ಇವರನ್ನು ವಿಭಾಗದ ದೈನಂದಿನ ಕೆಲಸಕಾರ್ಯಗಳು ಸುಲಲಿತವಾಗಿ ನಡೆಯಲು ತಾತ್ಕಾಲಿಕವಾಗಿ ಅಧ್ಯಕ್ಷರನ್ನಾಗಿ ನೇಮಕ ಮಾಡಬಹುದೆಂದು ಸಭೆಯಲ್ಲಿ ಪ್ರಸ್ತಾಪಿಸಿದರು. |
| **ತೀರ್ಮಾನ** | ಸಂವಹನ ಮತ್ತು ಪತ್ರಿಕೋದ್ಯಮ ಅಧ್ಯಯನ ವಿಭಾಗದ ದೈನಂದಿನ ಕೆಲಸಕಾರ್ಯಗಳು ಸುಲಲಿತವಾಗಿ ಜರುಗುವ ಉದ್ದೇಶದಿಂದ ತಾತ್ಕಾಲಿಕವಾಗಿ ಅಥವಾ ಮುಂದಿನ ಆದೇಶದವರೆಗೆ ದಿನಾಂಕ: 01-01-2022ರಿಂದ ಜಾರಿಗೆ ಬಂದಂತೆ ಪ್ರೊ.ಸಿ.ಕೆ.ಪುಟ್ಟಸ್ವಾಮಿ, ಪ್ರಾಧ್ಯಾಪಕರು, ಸಂವಹನ ಮತ್ತು ಪತ್ರಿಕೋದ್ಯಮ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ಸದರಿ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರನ್ನಾಗಿ ನೇಮಕ ಮಾಡಲು ಸಿಂಡಿಕೇಟ್ ತೀರ್ಮಾನಿಸಿತು. |
| **ಸಾಮಾನ್ಯ ಸಭೆ 2021/10.15** | 2021-22ನೇ ಶೈಕ್ಷಣಿಕ ಸಾಲಿನ ಹಾಸನದ ಸರ್ಕಾರಿ ಕಲಾ, ವಾಣಿಜ್ಯ ಮತ್ತು ಸ್ನಾತಕೋತ್ತರ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯ ಅನುಮೋದನೆಗಾಗಿ ಮಂಡಿಸುವ ಬಗ್ಗೆ. |
| **ತೀರ್ಮಾನ** | 2021-22ನೇ ಶೈಕ್ಷಣಿಕ ಸಾಲಿನ ಹಾಸನದ ಸರ್ಕಾರಿ ಕಲಾ, ವಾಣಿಜ್ಯ ಮತ್ತು ಸ್ನಾತಕೋತ್ತರ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |
| **ಸಾಮಾನ್ಯ ಸಭೆ 2021/10.16** | 2021-22ನೇ ಶೈಕ್ಷಣಿಕ ಸಾಲಿನ ಹಾಸನದ ಸರ್ಕಾರಿ ವಿಜ್ಞಾನ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯ ಅನುಮೋದನೆಗಾಗಿ ಮಂಡಿಸುವ ಬಗ್ಗೆ. |
| **ತೀರ್ಮಾನ** | 2021-22ನೇ ಶೈಕ್ಷಣಿಕ ಸಾಲಿನ ಹಾಸನದ ಸರ್ಕಾರಿ ವಿಜ್ಞಾನ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |

| | |
|---|---|
| ಸಾಮಾನ್ಯ ಸಭೆ 2021/10.17 | 2021-22ನೇ ಶೈಕ್ಷಣಿಕ ಸಾಲಿನ ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕು, ಭಾರತೀನಗರದ ಭಾರತೀ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯ ಅನುಮೋದನೆಗಾಗಿ ಮಂಡಿಸುವ ಬಗ್ಗೆ. |
| ತೀರ್ಮಾನ | 2021-22ನೇ ಶೈಕ್ಷಣಿಕ ಸಾಲಿನ ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕು, ಭಾರತೀನಗರದ ಭಾರತೀ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2021/10.18 | 2021-22ನೇ ಶೈಕ್ಷಣಿಕ ಸಾಲಿನ ಮೈಸೂರಿನ ಬನ್ನಿಮಂಟಪದಲ್ಲಿರುವ ಸೆಂಟ್ ಫಿಲೋಮಿನಾಸ್ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯ ಅನುಮೋದನೆಗಾಗಿ ಮಂಡಿಸುವ ಬಗ್ಗೆ. |
| ತೀರ್ಮಾನ | 2021-22ನೇ ಶೈಕ್ಷಣಿಕ ಸಾಲಿನ ಮೈಸೂರಿನ ಬನ್ನಿಮಂಟಪದಲ್ಲಿರುವ ಸೆಂಟ್ ಫಿಲೋಮಿನಾಸ್ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2021/10.19 | 2021-22ನೇ ಶೈಕ್ಷಣಿಕ ಸಾಲಿನ ಮಂಡ್ಯದ ಮಹಿಳಾ ಸರ್ಕಾರಿ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯ ಅನುಮೋದನೆಗಾಗಿ ಮಂಡಿಸುವ ಬಗ್ಗೆ. |
| ತೀರ್ಮಾನ | 2021-22ನೇ ಶೈಕ್ಷಣಿಕ ಸಾಲಿನ ಮಂಡ್ಯದ ಮಹಿಳಾ ಸರ್ಕಾರಿ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2021/10.20 | 2021-22ನೇ ಶೈಕ್ಷಣಿಕ ಸಾಲಿನ ಮೈಸೂರಿನ ಮಹಾರಾಣಿ ಮಹಿಳಾ ವಿಜ್ಞಾನ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯ ಅನುಮೋದನೆಗಾಗಿ ಮಂಡಿಸುವ ಬಗ್ಗೆ. |
| ತೀರ್ಮಾನ | 2021-22ನೇ ಶೈಕ್ಷಣಿಕ ಸಾಲಿನ ಮೈಸೂರಿನ ಮಹಾರಾಣಿ ಮಹಿಳಾ ವಿಜ್ಞಾನ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2021/10.21 | 2021-22ನೇ ಶೈಕ್ಷಣಿಕ ಸಾಲಿನ ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಮಹಿಳಾ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯ ಅನುಮೋದನೆಗಾಗಿ ಮಂಡಿಸುವ ಬಗ್ಗೆ. |
| ತೀರ್ಮಾನ | 2021-22ನೇ ಶೈಕ್ಷಣಿಕ ಸಾಲಿನ ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಮಹಿಳಾ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2021/10.22 | 2021-22ನೇ ಶೈಕ್ಷಣಿಕ ಸಾಲಿನ ಮೈಸೂರಿನ ಬಿ.ಎನ್. ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯ ಅನುಮೋದನೆಗಾಗಿ ಮಂಡಿಸುವ ಬಗ್ಗೆ. |
| ತೀರ್ಮಾನ | 2021-22ನೇ ಶೈಕ್ಷಣಿಕ ಸಾಲಿನ ಮೈಸೂರಿನ ಬಿ.ಎನ್. ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2021/10.23 | 2021-22ನೇ ಶೈಕ್ಷಣಿಕ ಸಾಲಿನ ಮೈಸೂರಿನ ಎಸ್.ಬಿ.ಆರ್.ಆರ್. ಮಹಾಜನ ಪ್ರಥಮ ದರ್ಜೆ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯ ಅನುಮೋದನೆಗಾಗಿ ಮಂಡಿಸುವ ಬಗ್ಗೆ. |
| ತೀರ್ಮಾನ | 2021-22ನೇ ಶೈಕ್ಷಣಿಕ ಸಾಲಿನ ಮೈಸೂರಿನ ಎಸ್.ಬಿ.ಆರ್.ಆರ್. ಮಹಾಜನ ಪ್ರಥಮ ದರ್ಜೆ ಸ್ವಾಯತ್ತತಾ ಕಾಲೇಜಿಗೆ ಪರಾಮರ್ಶನಾ ಸಮಿತಿಯು ಭೇಟಿ ನೀಡಿ ಪರಿಶೀಲಿಸಿ ಸಲ್ಲಿಸಿದ ವರದಿಯನ್ನು ಸಿಂಡಿಕೇಟ್ ಸಭೆಯು ಅನುಮೋದಿಸಿತು. |

| | |
|---|---|
| ಸಾಮಾನ್ಯ ಸಭೆ 2021/10.24 | ಸೆಂಟರ್ ಫಾರ್ ರಿಸರ್ಚ್, ಎಂ.ಎಸ್. ರಾಮಯ್ಯ ಇನ್ಸ್‌ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್, ಬೆಂಗಳೂರು ಇವರಿಗೆ ಹೊಸದಾಗಿ Management ವಿಷಯದಲ್ಲಿ ಸಂಶೋಧನೆ ನಡೆಸಲು ಮೈಸೂರು ವಿಶ್ವವಿದ್ಯಾನಿಲಯದಿಂದ ಸಂಶೋಧನಾ ಕೇಂದ್ರದ ಮಾನ್ಯತೆ ನೀಡಲು ಕೋರಿರುವ ಬಗ್ಗೆ. |
| ತೀರ್ಮಾನ | ಪರಿವೀಕ್ಷಣಾ ಸಮಿತಿಯು ಶಿಫಾರಸ್ಸಿನನ್ವಯ ಸೆಂಟರ್ ಫಾರ್ ರಿಸರ್ಚ್, ಎಂ.ಎಸ್. ರಾಮಯ್ಯ ಇನ್ಸ್‌ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್, ಬೆಂಗಳೂರು ಇವರಿಗೆ ಹೊಸದಾಗಿ Management ವಿಷಯದಲ್ಲಿ ಸಂಶೋಧನಾ ಕೇಂದ್ರದ ಮಾನ್ಯತೆ ನೀಡುವ ಸಂಬಂಧ ಸಿಂಡಿಕೇಟ್ ಸಭೆಯು ಪರಿಶೀಲಿಸಿ ಅನುಮೋದಿಸಿತು. |
| ಸಾಮಾನ್ಯ ಸಭೆ 2021/10.25 | ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಸ್ಥಾಪಿಸಿರುವ ಡಾ. ಬಾಬು ಜಗಜೀವನರಾಮ್ ಅಧ್ಯಯನ ಪೀಠಕ್ಕೆ ಸಂದರ್ಶಕ ಪ್ರಾಧ್ಯಾಪಕರನ್ನು ಮುಂದಿನ ಒಂದು ವರ್ಷದ ಅವಧಿಗೆ ಮುಂದುವರೆಸುವ ಬಗ್ಗೆ. |
| ತೀರ್ಮಾನ | ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಸ್ಥಾಪಿಸಿರುವ ಡಾ. ಬಾಬು ಜಗಜೀವನರಾಮ್ ಅಧ್ಯಯನ ಪೀಠಕ್ಕೆ ಪ್ರಸ್ತುತ ಸಂದರ್ಶಕ ಪ್ರಾಧ್ಯಾಪಕರಾಗಿ ಕಾರ್ಯ ನಿರ್ವಹಿಸುತ್ತಿರುವ ಪ್ರೊ. ಸಿ.ರಾಮಸ್ವಾಮಿ ಇವರನ್ನು ದಿನಾಂಕ: 22-01-2022 ರಿಂದ ಜಾರಿಗೆ ಬಂದಂತೆ ಮತ್ತೊಂದು ವರ್ಷದ ಅವಧಿಗೆ ಡಾ. ಬಾಬು ಜಗಜೀವನರಾಮ್ ಅಧ್ಯಯನ ಪೀಠಕ್ಕೆ ಸಂದರ್ಶಕ ಪ್ರಾಧ್ಯಾಪಕರಾಗಿ ನೇಮಕ ಮಾಡಲು ಸಿಂಡಿಕೇಟ್ ತೀರ್ಮಾನಿಸಿತು. |
| ಸಾಮಾನ್ಯ ಸಭೆ 2021/10.26 | ಆಹಾರ ಪದಾರ್ಥಗಳನ್ನು ಇ-ಪ್ರೊಕ್ಯೂರ್‌ಮೆಂಟ್ ಮುಖಾಂತರ ಟೆಂಡರ್ ಆಹ್ವಾನಿಸುವ ಬಗ್ಗೆ. |
| ತೀರ್ಮಾನ | ವಿಶ್ವವಿದ್ಯಾನಿಲಯದ ವಿವಿಧ ಶೈಕ್ಷಣಿಕ ಕಾರ್ಯಕ್ರಮಗಳಿಗೆ ಟೀ, ಕಾಫಿ, ಲಘು ಉಪಹಾರ ಮತ್ತು ಔತಣ ಇತ್ಯಾದಿ ಆಹಾರ ಪದಾರ್ಥಗಳನ್ನು ಸರಬರಾಜು ಮಾಡಲು ಹಾಗೂ ವಿಶ್ವವಿದ್ಯಾನಿಲಯದ ಕಾರ್ಯಕ್ರಮಗಳಿಗೆ ಆಗಮಿಸುವ ಗಣ್ಯರಿಗೆ ಹೂವಿನ ಹಾರ, ಹೂವಿನ ಗುಚ್ಛ ಮತ್ತು ವೇದಿಕೆಗೆ ಹೂವಿನ ಅಲಂಕಾರಗಳನ್ನು ಒಳಗೊಂಡಂತೆ ಎರಡು ವರ್ಷಗಳ ಅವಧಿಗೆ ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರ್ ಆಹ್ವಾನಿಸಲು ಸಿಂಡಿಕೇಟ್ ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2021/10.27 | ಜೆ.ಎಸ್.ಎಸ್. ಮಹಿಳಾ ಕಾಲೇಜು (ಸ್ವಾಯತ್ತ), ಸರಸ್ವತಿಪುರಂ, ಮೈಸೂರು ಇವರ ಸಂಸ್ಥೆಯಲ್ಲಿ English, Commerce, Chemistry ಮತ್ತು History ವಿಷಯದಲ್ಲಿ ಹೊಸದಾಗಿ ಸಂಶೋಧನಾ ಕಾರ್ಯ ಕೈಗೊಳ್ಳಲು ವಿಶ್ವವಿದ್ಯಾನಿಲಯದ ಮಾನ್ಯತೆ ಕೋರಿದ್ದ ಸಂಬಂಧ ವಿಶ್ವವಿದ್ಯಾನಿಲಯದ ಪರಿವೀಕ್ಷಣಾ ಸಮಿತಿಯು ಸಲ್ಲಿಸಿರುವ ವರದಿಗೆ ಅನುಮೋದನೆ ಕೋರುವ ಬಗ್ಗೆ. |
| ತೀರ್ಮಾನ | ಪರಿವೀಕ್ಷಣಾ ಸಮಿತಿಯ ಶಿಫಾರಸ್ಸಿನನ್ವಯ ಜೆ.ಎಸ್.ಎಸ್. ಮಹಿಳಾ ಕಾಲೇಜು (ಸ್ವಾಯತ್ತ), ಸರಸ್ವತಿಪುರಂ, ಮೈಸೂರು ಇವರ ಸಂಸ್ಥೆಯಲ್ಲಿ English, Commerce, Chemistry ಮತ್ತು History ವಿಷಯಗಳಲ್ಲಿ ಹೊಸದಾಗಿ ಸಂಶೋಧನಾ ಕಾರ್ಯ ಕೈಗೊಳ್ಳಲು ವಿಶ್ವವಿದ್ಯಾನಿಲಯದ ಮಾನ್ಯತೆ ನೀಡುವ ಸಂಬಂಧ ಸಿಂಡಿಕೇಟ್ ಸಭೆಯು ಪರಿಶೀಲಿಸಿ ಅನುಮೋದಿಸಿತು. |
| ಸಾಮಾನ್ಯ ಸಭೆ 2021/10.28 | ಬಿ.ಇ.ಟಿ. ಅಕಾಡೆಮಿ ಆಫ್ ಹೈಯರ್ ಎಜುಕೇಷನ್, ಪಿ.ಜಿ. ಮತ್ತು ಸಂಶೋಧನಾ ಕೇಂದ್ರ, ಭಾರತೀನಗರ, ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ ಇವರು ಕೋರಿರುವ ಹೆಚ್ಚುವರಿ ವಿಷಯಗಳ ಸಂಬಂಧ ಪರಿವೀಕ್ಷಣಾ ಸಮಿತಿ ಸಲ್ಲಿಸಿರುವ ವರದಿಯ ಬಗ್ಗೆ. |
| ತೀರ್ಮಾನ | ಪರಿವೀಕ್ಷಣಾ ಸಮಿತಿಯ ಶಿಫಾರಸ್ಸಿನನ್ವಯ ಬಿ.ಇ.ಟಿ. ಅಕಾಡೆಮಿ ಆಫ್ ಹೈಯರ್ ಎಜುಕೇಷನ್, ಪಿ.ಜಿ. ಮತ್ತು ಸಂಶೋಧನಾ ಕೇಂದ್ರ, ಭಾರತೀನಗರ, ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ ಸಂಸ್ಥೆಗೆ Zoology, Botany ಮತ್ತು Commerce ಕೋರ್ಸುಗಳಿಗೆ ಹೆಚ್ಚುವರಿಯಾಗಿ ವಿಶ್ವವಿದ್ಯಾನಿಲಯದ ಮಾನ್ಯತೆ ನೀಡುವ ಸಂಬಂಧ ಸಿಂಡಿಕೇಟ್ ಸಭೆಯು ಪರಿಶೀಲಿಸಿ ಅನುಮೋದಿಸಿತು. |

| | |
|---|---|
| ಸಾಮಾನ್ಯ ಸಭೆ 2021/10.29 | ಇಂಟರ್‌ನ್ಯಾಷನಲ್ ಇನ್ಸ್‌ಟಿಟ್ಯೂಟ್ ಫಾರ್ ಅಸಿಸ್ಟೆಡ್ ರೀಪ್ರೊಡಕ್ಟಿವ್ ಟೆಕ್ನಾಲಜಿ ಅಂಡ್ ರೀಸರ್ಚ್ ಸೆಂಟರ್, ಮೈಸೂರು ಇವರು ಕೋರಿರುವ ವಿಷಯಗಳ ಸಂಬಂಧ ಪರಿವೀಕ್ಷಣಾ ಸಮಿತಿ ಸಲ್ಲಿಸಿರುವ ವರದಿ ಬಗ್ಗೆ. |
| ತೀರ್ಮಾನ | ಪರಿವೀಕ್ಷಣಾ ಸಮಿತಿಯ ಶಿಫಾರಸ್ಸಿನನ್ವಯ ಇಂಟರ್‌ನ್ಯಾಷನಲ್ ಇನ್ಸ್‌ಟಿಟ್ಯೂಟ್ ಫಾರ್ ಅಸಿಸ್ಟೆಡ್ ರೀಪ್ರೊಡಕ್ಟಿವ್ ಟೆಕ್ನಾಲಜಿ ಅಂಡ್ ರೀಸರ್ಚ್ ಸೆಂಟರ್, ಮೈಸೂರು ಸಂಸ್ಥೆಗೆ 1. Certificate course in Clinical Embryology, 2. PG Diploma in Andrology & Clinical Embryology and 3. Diploma in Yogic Science ಪ್ರತಿ ಕೋರ್ಸಿಗೆ 40 ಪ್ರವೇಶಾತಿ ಸಂಖ್ಯಾಮಿತಿಯೊಂದಿಗೆ ಹೆಚ್ಚುವರಿ ವಿಷಯಗಳಲ್ಲಿ ವಿಶ್ವವಿದ್ಯಾನಿಲಯದಿಂದ ಮಾನ್ಯತೆ ನೀಡುವ ಸಂಬಂಧ ಸಿಂಡಿಕೇಟ್ ಸಭೆಯು ಪರಿಶೀಲಿಸಿ ಅನುಮೋದಿಸಿತು. |
| ಸಾಮಾನ್ಯ ಸಭೆ 2021/10.30 | ಪರೀಕ್ಷಾ ಅಕ್ರಮ ಹಾಗೂ ಲೋಪದೋಷಗಳ ವಿಚಾರಣ ಸಮಿತಿಯ ಶಿಫಾರಸುಗಳು. |
| ತೀರ್ಮಾನ | ಸೆಪ್ಟೆಂಬರ್/ಅಕ್ಟೋಬರ್ 2021ರಲ್ಲಿ ನಡೆದ ಬಿ.ಎ/ಬಿ.ಎಸ್ಸಿ/ಬಿ.ಕಾಂ/ಬಿ.ಬಿ.ಎಂ ಪದವಿಗಳ 2ನೇ, 4ನೇ ಮತ್ತು 6ನೇ ಸೆಮಿಸ್ಟರ್ ಮತ್ತು ಬಿ.ಎಡ್ ಮೂರನೇ ಸೆಮಿಸ್ಟರ್ ಹಾಗೂ ಎಂ.ಕಾಂ ನಾಲ್ಕನೇ ಸೆಮಿಸ್ಟರ್ (ಸ್ನಾತಕೋತ್ತರ) ಪರೀಕ್ಷೆಗಳಲ್ಲಿ ಅಕ್ರಮದ ಆರೋಪಕ್ಕೆ ಒಳಗಾಗಿರುವ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ ಎಂ.ಪಿ.ಎಲ್.ಇ ಸಮಿತಿಯು ಸಲ್ಲಿಸಿರುವ ಶಿಫಾರಸುಗಳನ್ನು ಸಭೆಯು ಅನುಮೋದಿಸಿತು. |
| ಸಾಮಾನ್ಯ ಸಭೆ 2021/10.31 | ಪ್ರಾಣಿಶಾಸ್ತ್ರ ಅಧ್ಯಯನ ವಿಭಾಗಕ್ಕೆ ಅಧ್ಯಕ್ಷರನ್ನು ನೇಮಕ ಮಾಡುವ ಬಗ್ಗೆ.<br>ಪ್ರಾಣಿಶಾಸ್ತ್ರ ಅಧ್ಯಯನ ವಿಭಾಗದಲ್ಲಿ ಪ್ರಸ್ತುತ ಅಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿರುವ ಪ್ರೊ. ಎಸ್.ಎಸ್.ಮಾಲಿನಿ, ಪ್ರಾಧ್ಯಾಪಕರು, ಪ್ರಾಣಿಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರ ಅಧ್ಯಕ್ಷರ ಅವಧಿಯು ದಿನಾಂಕ: 31-01-2022 ಕ್ಕೆ ಮುಕ್ತಾಯಗೊಳ್ಳುತ್ತಿದೆ. ಇವರ ನಂತರದ ಜೇಷ್ಠತೆಯಲ್ಲಿ ಪ್ರಾಣಿಶಾಸ್ತ್ರ ಅಧ್ಯಯನ ವಿಭಾಗದಲ್ಲಿ ಪ್ರೊ. ಎಸ್.ಬಸವರಾಜಪ್ಪ ಇವರು ಹಿರಿಯರಾಗಿರುವುದನ್ನು ಸಭೆಯಲ್ಲಿ ಗಮನಿಸಲಾಯಿತು. |
| ತೀರ್ಮಾನ | ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000, ಪ್ರಕರಣ 34(7)ರ ಪ್ರಕಾರ ಪ್ರೊ. ಎಸ್.ಬಸವರಾಜಪ್ಪ, ಪ್ರಾಧ್ಯಾಪಕರು, ಪ್ರಾಣಿಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇವರನ್ನು ದಿನಾಂಕ: 01-02-2022 ರಿಂದ ಜಾರಿಗೆ ಬಂದಂತೆ ಎರಡು ವರ್ಷಗಳ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಪ್ರಾಣಿಶಾಸ್ತ್ರ ಅಧ್ಯಯನ ವಿಭಾಗದ ಅಧ್ಯಕ್ಷರನ್ನಾಗಿ ನೇಮಕ ಮಾಡಲು ಸಭೆಯಲ್ಲಿ ತೀರ್ಮಾನಿಸಲಾಯಿತು. |
| ಸಾಮಾನ್ಯ ಸಭೆ 2021/10.32 | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹೆತ್ತೂರು ಎಂಬುದರ ಬದಲಾಗಿ ವಿಶ್ವವಿದ್ಯಾನಿಲಯ ಘಟಕ ಕಾಲೇಜು ಎಂದು ನಮೂದಿಸಿ ತಿದ್ದುಪಡಿ ಆದೇಶ ಹೊರಡಿಸಿರುವ ವಿಷಯವನ್ನು ಅನುಸಮರ್ಥನೆಗಾಗಿ ಮಂಡಿಸಿದೆ. |
| ತೀರ್ಮಾನ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹೆತ್ತೂರು ಎಂಬುದರ ಬದಲಾಗಿ ವಿಶ್ವವಿದ್ಯಾನಿಲಯ ಘಟಕ ಕಾಲೇಜು ಎಂದು ನಮೂದಿಸಿ ತಿದ್ದುಪಡಿ ಆದೇಶ ಹೊರಡಿಸಿರುವ ವಿಶ್ವವಿದ್ಯಾನಿಲಯದ ಕ್ರಮವನ್ನು ಸಭೆಯು ಅನುಸಮರ್ಥಿಸಿತು. |
| ಸಾಮಾನ್ಯ ಸಭೆ 2021/10.33 | ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸಿರುವ ಕಾಲೇಜುಗಳಿಂದ ವಸೂಲು ಮಾಡಿರುವ ಶುಲ್ಕದ ಬಗೆಗೆ. |
| ತೀರ್ಮಾನ | ಮೈಸೂರು ವಿಶ್ವವಿದ್ಯಾನಿಲಯದಿಂದ ಪೂರ್ವಾನುಮತಿಯನ್ನು ಪಡೆಯದೇ ವಿಶ್ವವಿದ್ಯಾನಿಲಯದ ಹೆಸರು ಮತ್ತು ಲಾಂಛನ ಬಳಸಿ ನಕಲಿ ರಶೀದಿ ಮುಖಾಂತರ ಕೆಲವರು ಕ್ರೀಡಾ ಶುಲ್ಕವನ್ನು ವಸೂಲಿ ಮಾಡಿರುವ ಸಂಬಂಧ ಜಾಗ್ರತೆ ತೆಗೆದುಕೊಳ್ಳದ ಡಾ. ಸಿ.ವೆಂಕಟೇಶ, ಅಧ್ಯಕ್ಷರು, ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಜ್ಞಾನ ಅಧ್ಯಯನ ವಿಭಾಗ, ಸ್ಪೋರ್ಟ್ಸ್ ಪೆವಿಲಿಯನ್, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಇವರಿಗೆ ವಿಶ್ವವಿದ್ಯಾನಿಲಯದ ವತಿಯಿಂದ ಎಚ್ಚರಿಕೆ ನೋಟೀಸ್ ಜಾರಿಗೊಳಿಸಲು ಮತ್ತು ಸದರಿಯವರು ಸಮಿತಿಯ ಮುಂದೆ ಕ್ಷಮೆ ಕೋರಿರುವುದನ್ನು ಗಮನಿಸಿದ ಸಭೆಯು ಇನ್ನು ಮುಂದೆ ಇಂತಹ ಪ್ರಕರಣಗಳು ಜರುಗದಂತೆ ಮುನ್ನೆಚ್ಚರಿಕೆ ವಹಿಸುತ್ತೇನೆಂದು ಲಿಖಿತ ಮುಚ್ಚಳಿಕೆಯನ್ನು ಪಡೆದುಕೊಳ್ಳಲು ಸಿಂಡಿಕೇಟ್ ತೀರ್ಮಾನಿಸಿತು. |

| | |
|---|---|
| ಸಾಮಾನ್ಯ ಸಭೆ 2021/10.34 | ಡಾ. ಬಿ.ಆರ್. ಅಂಬೇಡ್ಕರ್ ಸ್ನಾತಕೋತ್ತರ ಕೇಂದ್ರ, ಚಾಮರಾಜನಗರ ಇಲ್ಲಿ ಸ್ಥಾಪಿಸಿರುವ ಪುತ್ಥಳಿಗೆ ಅಕ್ರಮವಾಗಿ ಹಣ ಸಂಗ್ರಹಣೆ ಮಾಡಿರುವ ಬಗ್ಗೆ. |
| ತೀರ್ಮಾನ | ಡಾ. ಬಿ.ಆರ್. ಅಂಬೇಡ್ಕರ್ ಸ್ನಾತಕೋತ್ತರ ಕೇಂದ್ರ, ಚಾಮರಾಜನಗರ ಇಲ್ಲಿ ಸ್ಥಾಪಿಸಿರುವ ಪುತ್ಥಳಿಗೆ ಅಕ್ರಮವಾಗಿ ಹಣ ಸಂಗ್ರಹಣೆ ಮಾಡಿರುವ ಸಂಬಂಧ ರಚಿಸಲಾಗಿರುವ ತನಿಖಾ ಸಮಿತಿಯು ತನಿಖಾ ನಿರ್ಣಯವನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಿರುತ್ತಾರೆ. ತನಿಖಾ ನಿರ್ಣಯದ ಎಲ್ಲಾ ಅಂಶಗಳನ್ನು ಚರ್ಚಿಸಿ ಆಲಿಸಿದ ಸಭೆಯು ಮುಂದಿನ ಸಿಂಡಿಕೇಟ್ ಸಭೆಯಲ್ಲಿ ಸೂಕ್ತ ನಿರ್ಧಾರ ತೆಗೆದುಕೊಳ್ಳಲು ಸಿಂಡಿಕೇಟ್ ತೀರ್ಮಾನಿಸಿತು. |
| ಸಾಮಾನ್ಯ ಸಭೆ 2021/10.35 | 2021-22ನೇ ಸಾಲಿನಲ್ಲಿ ನಡೆಯಲಿರುವ ಸ್ನಾತಕ ಮತ್ತು ಸ್ನಾತಕೋತ್ತರ ಪದವಿ ಪರೀಕ್ಷೆಗಳಿಗೆ ರಚನೆ ಮಾಡಿರುವ ಪರೀಕ್ಷಾ ಮಂಡಳಿ ಬಗ್ಗೆ. |
| ತೀರ್ಮಾನ | ವಿಶ್ವವಿದ್ಯಾನಿಲಯದ ಕಾಯ್ದೆ 2000 ಪ್ರಕರಣ 36ರ ಅನ್ವಯ 2021-22ನೇ ಶೈಕ್ಷಣಿಕ ಸಾಲಿನ ಫೆಬ್ರವರಿ/ಮಾರ್ಚ್ ಮಾಹೆಯಲ್ಲಿ ಪ್ರಾರಂಭವಾಗಲಿರುವ ಸ್ನಾತಕ ಮತ್ತು ಸ್ನಾತಕೋತ್ತರ ಪದವಿ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಅಧ್ಯಕ್ಷರು ಮತ್ತು ಸದಸ್ಯರುಗಳನ್ನು ಒಳಗೊಂಡ ಪರೀಕ್ಷಾ ಮಂಡಳಿಯನ್ನು ರಚಿಸಿ ಅಧಿಸೂಚನೆಗಳನ್ನು ಹೊರಡಿಸಿ ಕ್ರಮ ಕೈಗೊಂಡಿರುವುದನ್ನು ಸಿಂಡಿಕೇಟ್ ಸಭೆಯು ಅನುಸಮರ್ಥಿಸಿತು. |
| ಸಾಮಾನ್ಯ ಸಭೆ 2021/10.36 | PROMOTIONS TO UNIVERSITY TEACHERS UNDER UGC-CAS |
| ತೀರ್ಮಾನ | The recommendations of the Selection Committee in various subjects for promotion of teachers in various disciplines and Deputy Librarian to the next academic level furnished at Annexure-A is approved. Further, the Syndicate has also decided to extend the monetary benefits to the Teachers/Deputy Librarian from the date of the decision of the Syndicate. |

**ಇತರೆ ವಿಷಯಗಳು:**

1. ಶ್ರೀ ಪ್ರದೀಪ್‌ಕುಮಾರ್ ದೀಕ್ಷಿತ್ ಅವರು ಘಟಿಕೋತ್ಸವಕ್ಕೆ ಸಂಬಂಧಿಸಿದಂತೆ ದಾನಿಗಳು ನೀಡಿರುವ ದತ್ತಿ ಹಾಗೂ ನಗದು ಬಹುಮಾನಗಳ ಪುಸ್ತಕವನ್ನು ಮುಂಬರುವ ಘಟಿಕೋತ್ಸವದ ಮೊದಲು ಸಿದ್ಧಪಡಿಸಲು ಕೋರಿದರು.

2. ಶ್ರೀ ಎಸ್.ಡಿ.ದೊಡ್ಡಚಾರಿ ಅವರು ಮಾತನಾಡಿ, 102ನೇ ಘಟಿಕೋತ್ಸವಕ್ಕೆ ಸಂಬಂಧಿಸಿದಂತೆ ಒಂದೇ ಒಂದು "Dias plan"ನ್ನು ಸಿದ್ಧಪಡಿಸಬೇಕೆಂದು ತಿಳಿಸಿದರು.

3. ಅಧ್ಯಾಪಕರು/ಅಧ್ಯಾಪಕೇತರರಿಗೆ Bio-metric system ನ್ನು ಅಳವಡಿಸುವುದು ಸೂಕ್ತವೆಂದು ಡಾ. ದಾಮೋಧರ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

4. ಪಿಎಚ್.ಡಿ ಪ್ರವೇಶ ಪರೀಕ್ಷೆಗೆ ಸಂಬಂಧಿಸಿದಂತೆ ಸದಸ್ಯರು ಕೇಳಿದ ಪ್ರಶ್ನೆಗಳಿಗೆ ಉತ್ತರಿಸಿದ ಮಾನ್ಯ ಕುಲಪತಿಯವರು ಪಿಎಚ್.ಡಿ. ವಿಷಯಗಳಲ್ಲಿ ಸೀಟುಗಳ ಲಭ್ಯತೆಯ ಆಧಾರದ ಮೇಲೆ ಪ್ರವೇಶ ಪರೀಕ್ಷೆಯನ್ನು ನಡೆಸುವುದನ್ನು ಪರಿಶೀಲಿಸಲಾಗುವುದೆಂದರು.

5. International Institute for Assisted Reproductive technology and Research Center, Mysore ಇವರ ಸಂಸ್ಥೆಯೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವುದು.

6. ಡಾ.ಎಂ.ಎಸ್.ದಾಮೋದರ್ ಅವರು ಮಾತನಾಡಿ, ಮೈಸೂರು ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳಲ್ಲಿ ಯಾವುದಾದರೂ ಕಾಲೇಜಿಗೆ ಭಾರತದ ರಕ್ಷಣಾ ಸಿಬ್ಬಂದಿ ಜನರಲ್ ಮುಖ್ಯಸ್ಥ **ಬಿಪಿನ್ ರಾವತ್** ಅವರ ಹೆಸರನ್ನು ಇಡುವುದು ಹಾಗೂ ಅದರ ಕೆಳಗಡೆ ವಿಶ್ವವಿದ್ಯಾನಿಲಯ ಘಟಕ ಕಾಲೇಜು ಎಂದು

ನಮೂದಿಸಬೇಕೆಂದು ಅಭಿಪ್ರಾಯ ವ್ಯಕ್ತಪಡಿಸಿದರು. ಇದಕ್ಕೆ ಉತ್ತರಿಸಿದ ಮಾನ್ಯ ಕುಲಪತಿಯವರು ಈ ಕುರಿತು ಮುಂದಿನ ಸಿಂಡಿಕೇಟ್ ಸಭೆಗಳಲ್ಲಿ ತೀರ್ಮಾನ ಮಾಡುವ ಇಂಗಿತ ವ್ಯಕ್ತಪಡಿಸಿದರು.

7. ಡಾ.ಬಿ.ಆರ್.ಅಂಬೇಡ್ಕರ್‌ರವರ ಪುತ್ಥಳಿಯಲ್ಲಿ ಕೊಡುಗೆದಾರರು ಎಂದು ನಮೂದಿಸಿರುವ ಪ್ರೊ.ಶಿವಬಸವಯ್ಯರವರ ಹೆಸರನ್ನು ಸದರಿಯವರ ಸಮ್ಮುಖದಲ್ಲಿಯೇ ತೆಗೆದು ಹಾಕುವುದು ಹಾಗೂ ಪ್ರೊ.ಶಿವಬಸವಯ್ಯ ಅವರು ಉದ್ಯೋಗಿಗಳಿಗೆ ನೀಡಬೇಕಾಗಿರುವ ಸಂಭಾವನೆಯನ್ನು ಕೂಡಲೇ ಸಂಬಂಧಪಟ್ಟವರಿಗೆ ವಿತರಿಸುವುದು.

8. ವಿಶ್ವವಿದ್ಯಾನಿಲಯದಿಂದ ಮಾನ್ಯತೆ ಪಡೆದಿರುವ ಬಾಹ್ಯ ಸಂಶೋಧನಾ ಕೇಂದ್ರಗಳ ಕಾರ್ಯ ಪ್ರಗತಿಯನ್ನು ಕುಲಸಚಿವ (ಪರೀಕ್ಷಾಂಗ)ರವರ ಅಧ್ಯಕ್ಷತೆಯಲ್ಲಿ ಭೇಟಿ ನೀಡಿ review ಮಾಡಲು ಸಭೆಯಲ್ಲಿ ನಿರ್ಧರಿಸಲಾಯಿತು.

9. ಡಾ. ಚೈತ್ರ ನಾರಾಯಣ ಅವರು ಮಾತನಾಡಿ ಪಿಹೆಚ್.ಡಿ ಮಹಾಪ್ರಬಂಧವನ್ನು Plagiarism Software ನಲ್ಲಿ ಪರಿಶೀಲಿಸಲು ಪ್ರಸ್ತುತ ನೀಡಿರುವ ಕಾಲಾವಧಿಯನ್ನು (ಮೂರು ತಿಂಗಳು) ಯಾವುದೇ ಕಾರಣಕ್ಕೂ ವಿಸ್ತರಣೆ ಮಾಡಬಾರದೆಂದು ಕೋರಿದರು. ಇದಕ್ಕೆ ಮಾನ್ಯ ಕುಲಪತಿಗಳು ಒಪ್ಪಿಗೆ ಸೂಚಿಸಿದರು.

10. 2021-22ನೇ ಸಾಲಿನಲ್ಲಿ ಒಂದು ಬಾರಿಗೆ ಮಾತ್ರ ಅನ್ವಯವಾಗುವಂತೆ ವಿಶೇಷವಾಗಿ ನೀಡಲಾಗಿದ್ದ ಪಿಎಚ್.ಡಿ ಹೆಚ್ಚುವರಿ ಸೀಟುಗಳನ್ನು ದಿನಾಂಕ: 20-01-2022 ರಿಂದ ರದ್ದುಗೊಳಿಸಿ, ಇನ್ನು ಮುಂದೆ (2020-2021 ರ ಮಾರ್ಗಸೂಚಿ) ಪಿಎಚ್.ಡಿ ಮಾರ್ಗಸೂಚಿ 10.5ರಲ್ಲಿ ಯುಜಿಸಿಯು ನಿಗದಿಪಡಿಸಿರುವಂತೆ ಸಹಾಯಕ ಪ್ರಾಧ್ಯಾಪಕರಿಗೆ 4, ಸಹ ಪ್ರಾಧ್ಯಾಪಕರಿಗೆ 6 ಮತ್ತು ಪ್ರಾಧ್ಯಾಪಕರುಗಳಿಗೆ 8 ಅಭ್ಯರ್ಥಿಗಳಿಗೆ ಮಾರ್ಗದರ್ಶನ ಮಾಡಲು ಮಾತ್ರ ಅನುಮತಿ ನೀಡಲಾಗುವುದು ಎಂದು ಮಾನ್ಯ ಕುಲಪತಿಗಳು ತಿಳಿಸಿದರು.

11. ಡಾ. ಈ.ಸಿ.ನಿಂಗರಾಜೇ ಗೌಡ, ಡಾ. ಚೈತ್ರ ನಾರಾಯಣ, ಡಾ. ಎಂ.ಎಸ್.ದಾಮೋದರ ಹಾಗೂ ಶ್ರೀ ಎಂ.ಬಿ.ಗಪ್ಪಣ್ಣ ಅವರುಗಳು ಮಾತನಾಡಿ, ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಸಂಶೋಧನಾ ಮಾರ್ಗದರ್ಶಕರಾಗಲು ಅರ್ಹತೆ ಹೊಂದಿರುವ ಎಲ್ಲಾ ವಿಷಯದ ಅಧ್ಯಾಪಕರುಗಳ List of Research Guides with vacancy positions in various streams ಅನ್ನು ಜರೂರಾಗಿ ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ upload ಮಾಡುವುದರಿಂದ ಸ್ನಾತಕೋತ್ತರ ಪದವಿ ನಂತರ ಪಿಹೆಚ್.ಡಿ ಸಂಶೋಧನಾ ಕಾರ್ಯ ಕೈಗೊಳ್ಳುವ ವಿದ್ಯಾರ್ಥಿಗಳಿಗೆ ಅನುಕೂಲವಾಗುತ್ತದೆಂದು ಸಭೆಯಲ್ಲಿ ಪ್ರಸ್ತಾಪಿಸಿದರು.

ಈ ಪ್ರಸ್ತಾವನೆಗೆ ಮಾನ್ಯ ಕುಲಸಚಿವರು (ಪರೀಕ್ಷಾಂಗ) ಅವರು ಪ್ರತಿಕ್ರಿಯಿಸಿ, ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ತುರ್ತಾಗಿ upload ಮಾಡಲಾಗುವುದೆಂದು ತಿಳಿಸಿದರು.

12. ಡಾ.ನಾಗರಾಜು ಅವರು ಮಾತನಾಡಿ, ಪ್ರಸ್ತುತವಿರುವ ಬಿ.ಎಡ್ ಪರೀಕ್ಷಾ ಸಂಭಾವನೆಯನ್ನು ಹೆಚ್ಚಿಸಬೇಕೆಂದು ಸಭೆಯನ್ನು ಕೋರಿದರು. ಈ ವಿಷಯವನ್ನು ಪರಿಶೀಲಿಸಲಾಗುವುದೆಂದು ಕುಲಪತಿಗಳು ತಿಳಿಸಿದರು.

13. ಡಾ.ಚೈತ್ರ ನಾರಾಯಣ್ ಅವರು ಮಾತನಾಡಿ, ಹಿಂದಿನ ಹಾಗೂ ಪ್ರತಿ ಸಿಂಡಿಕೇಟ್ ಸಭೆಯ ನಡವಳಿಗಳನ್ನು ಮೈಸೂರು ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ upload ಮಾಡಬೇಕೆಂದು ತಿಳಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಕುಲಸಚಿವರು ದೃಢೀಕೃತ ನಡಾವಳಿಗಳನ್ನು ಈಗಾಗಲೇ upload ಮಾಡಿದೆ. ಈ ಹಿಂದಿನ ಎರಡು ನಡಾವಳಿಗಳು ಇಂದು ದೃಢೀಕೃತಗೊಂಡಿರುವುದರಿಂದ ಒಂದೆರೆಡು ದಿನಗಳಲ್ಲಿ ಅವುಗಳನ್ನು ಕೂಡ upload ಮಾಡುತ್ತೇವೆ ಎಂದು ತಿಳಿಸಿದರು.

ಅಂತಿಮವಾಗಿ, ಕುಲಸಚಿವರು ಸಭೆಯಲ್ಲಿ ಮುಕ್ತವಾಗಿ ಚರ್ಚಿಸಿ ಸೂಕ್ತ ನಿರ್ಣಯಗಳನ್ನು ತೆಗೆದುಕೊಳ್ಳಲು ಸಹಕರಿಸಿದ ಎಲ್ಲಾ ಸದಸ್ಯರುಗಳಿಗೆ ವಂದನೆಗಳನ್ನರ್ಪಿಸುವ ಮೂಲಕ ಸಭೆಯು ಮುಕ್ತಾಯವಾಯಿತು.

ಕುಲಸಚಿವರು ಹಾಗೂ ಸದಸ್ಯ ಕಾರ್ಯದರ್ಶಿ

ಕುಲಪತಿಗಳು ಹಾಗೂ ಅಧ್ಯಕ್ಷರು